# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 777
**ಮಾನ್ಯ ಸದಸ್ಯರ ಹೆಸರು** : ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 26-12-2022
**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರದ ಯೋಜನೆಯಾದ "ಸ್ವದೇಶಿ ದರ್ಶನ್ ಮತ್ತು ಪ್ರಸಾದ್" ಯೋಜನೆಯಡಿ ಇಲ್ಲಿಯ ತನಕ ರಾಜ್ಯಕ್ಕೆ ಬಂದಿರುವ ಅನುದಾನವೆಷ್ಟು; | ಕೇಂದ್ರ ಸರ್ಕಾರದ ಯೋಜನೆಯಾದ "ಸ್ವದೇಶ್ ದರ್ಶನ್" ಮತ್ತು "ಪ್ರಸಾದ್" ಯೋಜನೆಯಡಿ ಇಲ್ಲಿಯ ತನಕ ರಾಜ್ಯಕ್ಕೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಆ) | ಈ ಯೋಜನೆಯ ಅನುದಾನದಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಹಾಗೂ ಈ ಕಾಮಗಾರಿಗಳಿಗೆ ನೀಡಿರುವ ಮೊತ್ತವೆಷ್ಟು; (ವಿವರ ನೀಡುವುದು) | **'ಪ್ರಸಾದ್ ಯೋಜನೆ"**<br>ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ "ಪ್ರಸಾದ್" ಯೋಜನೆಯಡಿಯಲ್ಲಿ ಮೈಸೂರು ಜಿಲ್ಲೆಯ ಶ್ರೀ ಚಾಮುಂಡೇಶ್ವರಿ ದೇವಿ ಸನ್ನಿಧಾನವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ರೂ.48.31 ಕೋಟಿಗಳಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ದಿನಾಂಕ: 18.10.2022 ರಂದು ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದ್ದು, ಯೋಜನೆಗೆ ತಾತ್ವಿಕ ಅನುಮೋದನೆ ದೊರಕಿರುತ್ತದೆ. ಅಂತಿಮ ಅನುಮೋದನಾ ಆದೇಶವನ್ನು ನಿರೀಕ್ಷಿಸಲಾಗುತ್ತಿದೆ.<br><br>**"ಸ್ವದೇಶ್ ದರ್ಶನ್ -2.0**<br>ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ದಿನಾಂಕ: 07.11.2022ರ ಪತ್ರದಲ್ಲಿ ಕೇಂದ್ರ ಸರ್ಕಾರದ ಸ್ವದೇಶ್ ದರ್ಶನ್ ಯೋಜನೆಯಡಿ ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ಮೈಸೂರು ಜಿಲ್ಲೆಯ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣವನ್ನು ಅಭಿವೃದ್ಧಿ ಪಡಿಸಲು ತಾತ್ವಿಕ ಅನುಮೋದನೆ ದೊರಕಿರುತ್ತದೆ. ಅಂತಿಮ ಅನುಮೋದನಾ ಆದೇಶವನ್ನು ನಿರೀಕ್ಷಿಸಲಾಗುತ್ತಿದೆ.<br><br>ಮೇಲ್ಕಂಡ ಎರಡೂ ಯೋಜನೆಗಳಡಿ ಚಾಮರಾಜನಗರ ಜಿಲ್ಲೆಗೆ ಯಾವುದೇ ಕಾಮಗಾರಿ ಇದುವರೆವಿಗೂ ಅನುಮೋದನೆಗೊಂಡಿರುವುದಿಲ್ಲ ಹಾಗೂ ಸದರಿ ಯೋಜನೆಗಳಡಿ ಯಾವುದೇ ಕಾಮಗಾರಿಗೆ ಇದುವರೆವಿಗೂ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಇ) | ಕೈಗೊಂಡಿದ್ದ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ; (ವಿವರ ನೀಡುವುದು) | ಕೇಂದ್ರ ಸರ್ಕಾರದ ಪ್ರಸಾದ್ ಮತ್ತು ಸ್ವದೇಶ್ ದರ್ಶನ್ ಯೋಜನೆಗಳಡಿಯಲ್ಲಿ ಯಾವುದೇ ಕಾಮಗಾರಿಗಳು ಪ್ರಾರಂಭಗೊಂಡಿರುವುದಿಲ್ಲ. |
| ಈ) | ಹಾಗೆಯೇ ಈ ಯೋಜನೆಯಡಿಯಲ್ಲಿ 2022-23ನೇ ಸಾಲಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಯಾವ ಯಾವ ಸ್ಥಳದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಹಾಗೂ ಒದಗಿಸಿರುವ ಅನುದಾನವೆಷ್ಟು? (ವಿವರ ನೀಡುವುದು) | 2022-23 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"ಪ್ರಸಾದ್"** ಯೋಜನೆಯಡಿಯಲ್ಲಿ ಮೈಸೂರು ಜಿಲ್ಲೆಯ ಶ್ರೀ ಚಾಮುಂಡೇಶ್ವರಿ ದೇವಿ ಸನ್ನಿಧಾನವನ್ನು ಅಭಿವೃದ್ಧಿಪಡಿಸುವ ಕಾಮಗಾರಿ ಹಾಗೂ **"ಸ್ವದೇಶ್ ದರ್ಶನ"** ಯೋಜನೆಯಡಿಯಲ್ಲಿ ಮೈಸೂರು ಜಿಲ್ಲೆಯ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣವನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಗಳಿಗೆ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದಿಂದ ತಾತ್ವಿಕ ಅನುಮೋದನೆ ದೊರಕಿದ್ದು, ಯೋಜನೆಗೆ ಅಂತಿಮ ಅನುಮೋದನಾ ಆದೇಶ ನಿರೀಕ್ಷಿಸಲಾಗುತ್ತಿದೆ ಹಾಗೂ ಯಾವುದೇ ಅನುದಾನ ಇದುವರೆವಿಗೂ ಬಿಡುಗಡೆಯಾಗಿರುವುದಿಲ್ಲ.<br><br>ಚಾಮರಾಜನಗರ ಜಿಲ್ಲೆಯಲ್ಲಿ "ಸ್ವದೇಶ್ ದರ್ಶನ್" ಮತ್ತು "ಪ್ರಸಾದ್" ಯೋಜನೆಗಳಡಿ ಯಾವುದೇ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ. |

**TOR 352 TDV 2022**

(ಆನಂದ್ ಸಿಂಗ್)
ಪ್ರವಾಸೋದ್ಯಮ,
ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು